For more job news visit : www.kpscvaani.com

# ಕಂ ಕ್ರಷ್ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ

■ ಹೈ.ಕ.ನ್ಯೂಸ್.

ಬಾಗಲಕೋಟೆ, ಮೇ 18 (ಕರ್ನಾಟಕ ವಾರ್ತೆ) : ಬಾಗಲಕೋಟೆ ಜಿಲ್ಲೆಯ 6 ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ 49 ಅಂಗನವಾಡಿ ಕಂ ಕ್ರಷ್ ಕೇಂದ್ರಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಅದಕ್ಕಾಗಿ 49 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳು ಹಾಗೂ 49 ಅಂಗನವಾಡಿ ಸಹಾಯಕಿಯರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಬಾಗಲಕೋಟೆ ತಾಲೂಕಿನಲ್ಲಿ 8 ಅಂಗನವಾಡಿ ಕಾರ್ಯಕರ್ತೆಯರು, 8 ಸಹಾಯಕಿರು, ಬೀಳಗಿ ತಾಲೂಕಿಗೆ 4 ಕಾರ್ಯಕರ್ತರು, 4 ಸಹಾಯಕಿಯರು, ಹುನಗುಂದ ತಾಲೂಕಿಗೆ 9 ಕಾರ್ಯಕರ್ತೆ, 9 ಸಹಾಯಕಿಯರು, ಬಾದಾಮಿ ತಾಲೂಕಿಗೆ 9 ಕಾರ್ಯಕರ್ತೆ, 9 ಸಹಾಯಕಿಯರು, ಜಮಖಂಡಿ ತಾಲೂಕಿಗೆ 10 ಕಾರ್ಯಕರ್ತೆಯರು, 10 ಸಹಾಯಕಿಯರು ಹಾಗೂ ಮುಧೋಳ ತಾಲೂಕಿಗೆ 9 ಕಾರ್ಯಕರ್ತೆಯರು, 9 ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುತ್ತಿದೆ.

ಅರ್ಜಿ ಸಲ್ಲಿಸುವವರು 10ನೇ ತರಗತಿ ಪಾಸಾಗಿದ್ದು, 18 ರಿಂದ 35 ವರ್ಷದೊಳಗಿರಬೇಕು. ವಿಧವೆಯರು, ಅಂಗವಿಕಲರಿಗೆ 10 ವರ್ಷ, ರಾಷ್ಟ್ರೀಯ ಶಿಶು ಪಾಲನಾ ಕೇಂದ್ರದಲ್ಲಿ ಈ ಹಿಂದೆ ಸೇವೆ ಸಲ್ಲಿಸಿದ ಕಾರ್ಯಕರ್ತೆ, ಸಹಾಯಕಿಯರ ಸೇವಾ ವರ್ಷದಷ್ಟು ವಿನಾಯಿತಿ ಇರುತ್ತದೆ. ಆಸಕ್ತರು ಅವಶ್ಯಕ ದಾಖಲಾತಿಗಳೊಂದಿಗೆ ಪೂರ್ಣ ವಿವರವನ್ನು ಅಭ್ಯರ್ಥಿಗಳು ಖುದ್ದಾಗಿ ಭರ್ತಿ ಮಾಡಿ ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಶೀಲ್ ಮಾಡಿದ ಪೆಟ್ಟಿಗೆಯಲ್ಲಿ ಖುದ್ದಾಗಿ ಜೂನ್ 12 ರೊಳಗಾಗಿ ಕಚೇರಿ ಅವಧಿಯಲ್ಲಿ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.